(7)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಪಿ ನಂಜುಂಡಿ ವಿಶ್ವಕರ್ಮ ಇವರ ನಿಯಮ 330ರಡಿ ಕೋರಿರುವ ಸೂಚನೆಗೆ ಉತ್ತರ.**

**ಸೂಚನೆ:**

**ವಿಶ್ವಕರ್ಮ ಸಮಾಜದ ಬಡಮಕ್ಕಳ ವಿದ್ಯಾಭ್ಯಾಸದ ಉದ್ದೇಶದಿಂದ 4 ವಸತಿ ನಿಲಯಗಳನ್ನು ನಿರ್ಮಿಸಲು ಹಿಂದಿನ ಸರ್ಕಾರವನ್ನು ಕೋರಲಾಗಿತ್ತು. ಕೋರಿಕೆಗೆ ಸ್ಪಂದಿಸಿದ ಅಂದಿನ ಸರ್ಕಾರ ಮೈಸೂರು ಮತ್ತು ಗುಲ್ಬರ್ಗ ಜಿಲ್ಲೆಯಲ್ಲಿ 2 ವಸತಿ ನಿಲಯಗಳನ್ನು ನಿರ್ಮಿಸುವುದಾಗಿ ಘೋಷಿಸಿರುತ್ತದೆ. ಅಲ್ಲದೇ ಸಂಬಂಧಪಟ್ಟ ಇಲಾಖೆಯು ಅನುಮೋದನೆಯನ್ನೂ ನೀಡಿರುತ್ತದೆ. ಸದರಿ ಘೋಷಣೆ ಹಾಗೂ ಅನುಮೋದನೆಗೆ ಹಾಲಿ ಸರ್ಕಾರ ಸೂಕ್ತ ಕ್ರಮ ತೆಗೆದುಕೊಳ್ಳಬೇಕಾಗಿ ವಿಶ್ವಕರ್ಮ ಸಮಾಜದ ಪರವಾಗಿ ಕೇಳಿಕೊಳ್ಳುತ್ತೇನೆ.**

**ವಸತಿ ನಿಲಯಗಳನ್ನು ನಿರ್ಮಿಸಲು ಸರ್ಕಾರ ನಿಗದಿಪಡಿಸಿರುವ ಅನುದಾನವೆಷ್ಟು, ವಸತಿ ನಿಲಯದ ಕಾಮಗಾರಿ ಪ್ರಾರಂಭಿಸಲಾಗಿದೆಯೇ? ಇಲ್ಲದಿದ್ದಲ್ಲಿ ಯಾವಾಗಿನಿಂದ ಪ್ರಾರಂಭಿಸಲಾಗುವುದು ತಿಳಿಸಿ.**

**ವಿಶ್ವಕರ್ಮ ಸಮಾಜದ ವಿಧ್ಯಾರ್ಥಿಗಳ ವಿದ್ಯಾಭ್ಯಾಸದ ಹಿತದೃಷ್ಟಿಯಿಂದ ಸರ್ಕಾರ ಯಾವ ಯಾವ ಯೋಜನೆಗಳನ್ನು ರೂಪಿಸಿದೆ, ರೂಪಿಸಿದ್ದಲ್ಲಿ ಮಾಹಿತಿ ನೀಡುವಂತೆ ಕೋರುತ್ತೇನೆ.**

**ಹೇಳಿಕೆ:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 2445 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು ಈ ವಿದ್ಯಾರ್ಥಿನಿಲಯಗಳಲ್ಲಿ 228661 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿರುತ್ತದೆ. ಮೈಸೂರು ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಒಟ್ಟು 220 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು ಒಟ್ಟು 20214 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿರುತ್ತದೆ. ಸದರಿ ವಿದ್ಯಾರ್ಥಿನಿಲಯಗಳಲ್ಲಿ ವಿಶ್ವಕರ್ಮ ಸಮುದಾಯದ ವಿದ್ಯಾರ್ಥಿಗಳಿಗೂ ಸಹ ಪ್ರವೇಶಾವಕಾಶವನ್ನು ಕಲ್ಪಿಸಲಾಗಿರುತ್ತದೆ.

ರಾಜ್ಯದ ಮೈಸೂರು ಮತ್ತು ಕಲಬುರಗಿ ಜಿಲ್ಲೆಗಳಿಗೆ ವಿಶ್ವಕರ್ಮ ಸಮಾಜದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ತಲಾ ಒಂದು ವಸತಿ ನಿಲಯ ಮಂಜೂರು ಮಾಡಲು ಜಿಲ್ಲಾ ಹಂತದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ತ್ರಿಸದಸ್ಯ ಸಮಿತಿಯ ವರದಿಯನ್ನು ಸಿದ್ಧಪಡಿಸಿ , ಸದರಿ ಜಿಲ್ಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿಶ್ವಕರ್ಮ ಸಮುದಾಯದ ವಿದ್ಯಾರ್ಥಿಗಳ ಮಾಹಿತಿಯನ್ನು ಕ್ರೋಢೀಕರಿಸಿ, ಸರ್ಕಾರದ ಮಾರ್ಗಸೂಚಿಗಳನ್ವಯ ಸ್ಥಳ ತಪಾಸಣಾ ವರದಿಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ಇವರ ಮೂಲಕ ಸಲ್ಲಿಸಲು ಮೈಸೂರು ಹಾಗೂ ಕಲಬುರಗಿ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ಸೂಚಿಸಲಾಗಿದ್ದು ಜಿಲ್ಲೆಗಳಿಂದ ಪ್ರಸ್ತಾವನೆ ಸ್ವೀಕೃತವಾದ ನಂತರ ಅನುದಾನದ ಲಭ್ಯತೆಯನುಸಾರ ಪರಿಶೀಲಿಸಲಾಗುವುದು.

2...

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಯಾವುದೇ ಒಂದು ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತ್ಯೇಕ ವಿದ್ಯಾರ್ಥಿನಿಲಯವನ್ನು ಮಂಜೂರು ಮಾಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಅತೀ ಹೆಚ್ಚು ಬೇಡಿಕೆ ಇರುವ ಜಿಲ್ಲೆಗಳಲ್ಲಿ ಹೊಸ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವ ಬಗ್ಗೆ ಪ್ರಸ್ತಾಪಿಸಲಾಗಿದ್ದು, ಪರಿಶೀಲನೆಯಲ್ಲಿರುತ್ತದೆ. ಸದರಿ ವಿದ್ಯಾರ್ಥಿನಿಲಯಗಳಲ್ಲಿಯೂ ವಿಶ್ವಕರ್ಮ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗುವುದು.

ಮುಂದುವರೆದಂತೆ, ವಿಶ್ವಕರ್ಮ ಸಮಾಜದ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಹಿತದೃಷ್ಠಿಯಿಂದ ಕರ್ನಾಟಕ ವಿಶ್ವಕರ್ಮ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲಾಗಿದ್ದು, ಸದರಿ ನಿಗಮದ ವತಿಯಿಂದ 2023-24 ನೇ ಸಾಲಿನಲ್ಲಿ ಅರಿವು ಶೈಕ್ಷಣಿಕ ಸಾಲ ಯೋಜನೆಯಡಿಯಲ್ಲಿ 100 ವಿಶ್ವಕರ್ಮ ವಿದ್ಯಾರ್ಥಿಗಳಿಗೆ ತಲಾ 1.00ಲಕ್ಷದಂತೆ ಶೈಕ್ಷಣಿಕ ಸಾಲ ಸೌಲಭ್ಯವನ್ನು ನೀಡಲಾಗುತ್ತಿದೆ ಹಾಗೂ ವಿದೇಶಿ ವ್ಯಾಸಂಗ ಯೋಜನೆಯಡಿ 5 ವಿದ್ಯಾರ್ಥಿಗಳಿಗೆ ತಲಾ 10.00 ಲಕ್ಷಗಳಂತೆ ಸಾಲ ಸೌಲಭ್ಯವನ್ನು ಒದಗಿಸಲಾಗುತ್ತಿದೆ.

**ಸಂಖ್ಯೆ: ಹಿಂವಕ 135 ಬಿಎಂಎಸ್ 2024**

**(ಶಿವರಾಜ ಎಸ್ ತಂಗಡಗಿ )**
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಹಾಗೂ ಕನ್ನಡ ಮತ್ತು ಸಂಸ್ಕೃತಿ
ಇಲಾಖೆ ಸಚಿವರು